# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 632 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಿ.ಇ.ಟಿ. ಪರೀಕ್ಷೆಯನ್ನು ಎಚ್ಚರವಹಿಸಿ ನಡೆಸದೇ ಪ್ರಶ್ನೆ ಪತ್ರಿಕೆಗಳಲ್ಲಿ ನಿಗದಿತ ಪಠ್ಯಕ್ರಮದಿಂದ ಹೊರತಾದಂತಹ ಹೆಚ್ಚಿನ ಪ್ರಶ್ನೆಗಳನ್ನು ಸೇರಿಸಿ ಪ್ರಶ್ನೆಪತ್ರಿಕೆ ತಯಾರಿಸಿ ಪರೀಕ್ಷೆ ನಡೆಸಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ: ಪಠ್ಯಕ್ರಮದಿಂದ ಹೊರತಾದಂತಹ ಹೆಚ್ಚಿನ ಪ್ರಶ್ನೆಗಳನ್ನು ಸೇರಿಸಿರುವ ಎಡವಟ್ಟಿನಿಂದ ಮಕ್ಕಳಿಗೆ ಆದ ಅನ್ಯಾಯವನ್ನು ಸರಿಪಡಿಸಲು ಸರ್ಕಾರವು ವಹಿಸಿದ ಕ್ರಮಗಳೇನು; | ಹೌದು ಬಂದಿದೆ.<br><br>ಸರ್ಕಾರದ ಆದೇಶ ಸಂ:ಇಡಿ 173 ಟಿಇಸಿ 2024, ದಿನಾಂಕ:22.04.2024ರಲ್ಲಿ ವಿಷಯ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯು ದಿನಾಂಕ:23.04.2024ರಂದು ನೀಡಿದ ವರದಿಯ ಪ್ರಕಾರ 2024ನೇ ಸಾಲಿನ ಸಿಇಟಿ ಪರೀಕ್ಷೆಯಲ್ಲಿ ನಾಲ್ಕು ವಿಷಯಗಳ ಒಟ್ಟು 50 ಪ್ರಶ್ನೆಗಳು (ಭೌತಶಾಸ್ತ್ರ-09, ರಸಾಯನ ಶಾಸ್ತ್ರ-15, ಗಣಿತ-15 ಮತ್ತು ಜೀವಶಾಸ್ತ್ರ-09) ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳನ್ನು ಕೇಳಲಾಗಿರುತ್ತದೆ.<br><br>ದಿನಾಂಕ:09.05.2024ರ ಆದೇಶದನ್ವಯ ಶ್ರೀ ಡಿ.ಎನ್.ನರಸಿಂಹರಾಜು, ಅಪರ ಮುಖ್ಯ ಕಾರ್ಯದರ್ಶಿಗಳು (ಭಾ.ಆ.ಸೇ., ನಿವೃತ್ತ) ಇವರ ಏಕ ಸದಸ್ಯ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ವಿಚಾರಣೆ ನಡೆಸಿ, ವರದಿ ನೀಡಿದ ನಂತರ ಪರಿಶೀಲಿಸಿ, ಅಗತ್ಯ ಕ್ರಮವಹಿಸಲಾಗುವುದು. |
| ಆ | ಪ್ರಶ್ನೆ ಪತ್ರಿಕೆಯಲ್ಲಿ ಆಗಿರುವ ಪ್ರಮಾದಕ್ಕೆ ಹೊಣೆಗಾರರು ಯಾರು; ಸದರಿಯವರುಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು; | |
| ಇ | ತಳ ಸಮುದಾಯ ರೈತಾಪಿ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಉನ್ನತ ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣ ಪಡೆಯಲು ಸಹಕಾರಿಯಾಗಲೆಂದು ಸಿ.ಇ.ಟಿ. ಪರೀಕ್ಷೆಯೆಂಬ ವಿಧಾನವನ್ನು ಪ್ರಾರಂಭಿಸಿದ್ದು, ಇತ್ತೀಚಿನ ದಿನಗಳಲ್ಲಿ ಇದರ ನಿರ್ವಹಣೆಯಲ್ಲಿ ಉಂಟಾಗುತ್ತಿರುವ ಲೋಪದೋಷಗಳಿಂದ ಆಸಕ್ತ ವಿದ್ಯಾರ್ಥಿಗಳು ಹಾಗೂ ಪೋಷಕರು ಬಹಳ ಆತಂಕದ ಪರಿಸ್ಥಿತಿಯನ್ನು ಎದುರಿಸುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು? | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೀಟು ಹಂಚಿಕೆಯನ್ನು ಮೂರು ಸುತ್ತುಗಳಲ್ಲಿ ನಡೆಸಲಾಗುತ್ತಿದ್ದು, ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಹಾಗೂ ಸರ್ಕಾರದ ಮೀಸಲಾತಿ ನಿಯಮಗಳ ಅನ್ವಯ ಸೀಟು ಹಂಚಿಕೆಯನ್ನು ಮಾಡಲಾಗುತ್ತಿದೆ. ಯಾವುದೇ ವರ್ಗದ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದಿಲ್ಲ. |

ಸಂ:ಇಡಿ 377 ಟಿಇಸಿ 2024

(ಡಾ.ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು